## ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 254 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 06.07.2023 |
| ಉತ್ತರಿಸುವ ಸಚಿವರು | : | ಮಾನ್ಯ ಉಪ ಮುಖ್ಯಮಂತ್ರಿಗಳು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಆಲಮಟ್ಟಿ ಜಲಾಶಯದ ಅಣೆಕಟ್ಟಿನ ಎತ್ತರವನ್ನು ಹೆಚ್ಚಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಈ ಯೋಜನೆಗೆ ಬೇಕಾಗಿರುವ ಹಣ ಎಷ್ಟು; ಯಾವಾಗ ಕ್ರಮ ವಹಿಸಲಾಗುವುದು; | ಹೌದು.<br><br>ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3ರ ಪರಿಷ್ಕೃತ ಅಂದಾಜು ಮೊತ್ತ ರೂ.51,148.94 ಕೋಟಿಗಳಾಗಿರುತ್ತದೆ.<br><br>ಕೃಷ್ಣಾ ಮೇಲ್ದಂಡೆ ಯೋಜನೆ ಹಂತ–3ರ ಯೋಜನೆಗಾಗಿ ನ್ಯಾಯಾಧೀಕರಣದ ತೀರ್ಪಿನನ್ವಯ ಹಂಚಿಕೆಯಾದ ನೀರಿನ ಬಳಕೆಗಾಗಿ ಆಲಮಟ್ಟಿ ಜಲಾಶಯದ ಸಂಗ್ರಹಣೆಯನ್ನು ಆರ್.ಎಲ್. 524.256 ಮೀ.ಗೆ ಎತ್ತರಿಸುವ ಅಂಶವು ಕೃಷ್ಣಾ ನ್ಯಾಯಾಧೀಕರಣ–2ರ ಅಂತಿಮ ತೀರ್ಪಿನ ಅಧಿಸೂಚನೆಗೆ ಒಳಪಟ್ಟಿದ್ದು, ಗೆಜೆಟ್ ಅಧಿಸೂಚನೆ ಹೊರಡಿಸಿದ ನಂತರ ಅಣೆಕಟ್ಟಿನ ಎತ್ತರ ಹೆಚ್ಚಿಸುವ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು. |
| ಆ) | ಜಲಾಶಯದ ಅಣೆಕಟ್ಟಿನ ಎತ್ತರವನ್ನು ಹೆಚ್ಚಳ ಮಾಡುವುದರಿಂದ ಎಷ್ಟು ಹೆಕ್ಟೇರ್ ಜಮೀನು ಮುಳುಗಡೆಯಾಗಲಿದೆ? (ವಿವರ ನೀಡುವುದು) | ಆಲಮಟ್ಟಿ ಜಲಾಶಯದ ಗೇಟಿನ ಎತ್ತರವನ್ನು ಹೆಚ್ಚಳ ಮಾಡುವುದರಿಂದ ಹಿನ್ನೀರಿನಲ್ಲಿ 188 ಗ್ರಾಮಗಳ ಸುಮಾರು 75,564 ಎಕರೆ ಮುಳುಗಡೆ ಹೊಂದುತ್ತದೆ.<br><br>ಇದಲ್ಲದೇ, ಜಲಾಶಯದ ಹಿನ್ನೀರಿನಿಂದ ಮುಳುಗಡೆ ಹೊಂದುವ ಪುನರ್‌ವಸತಿ ಕೇಂದ್ರಗಳ ಸ್ಥಾಪನೆಗಾಗಿ 20 ಗ್ರಾಮಗಳು ಮತ್ತು ಬಾಗಲಕೋಟೆ ಪಟ್ಟಣ ಪುನರ್ ವಸತಿಗಾಗಿ ಒಟ್ಟು 6,467 ಎಕರೆ ಕ್ಷೇತ್ರ ಸ್ವಾಧೀನಪಡಿಸಿಕೊಳ್ಳಬೇಕಾಗಿರುತ್ತದೆ. |

ಸಂಖ್ಯೆ:ಜಸಂಇ 28 ಡಬ್ಲ್ಯೂಬಿಎಂ 2023

(ಡಿ.ಕೆ.ಶಿವಕುಮಾರ್)
ಉಪ ಮುಖ್ಯಮಂತ್ರಿಗಳು